# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1118 |
| ಸದಸ್ಯರ ಹೆಸರು | : | ಡಾ|| ತಳವಾರ್ ಸಾಬಣ್ಣ (ನಾಮ ನಿರ್ದೇಶನ ಹೊಂದಿದವರು) |
| ಉತ್ತರಿಸುವ ದಿನಾಂಕ | : | 22.09.2022 |
| ಉತ್ತರಿಸುವ ಸಚಿವರು | : | ಮಾನ್ಯ ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಸಚಿವರು |

| ಕ್ರಮ ಸಂಖ್ಯೆ | ಪ್ರಶ್ನೆ | ಉತ್ತರ |
|---|---|---|
| ಅ) | ಹಿಂದುಳಿದ ಭಾಗವಾದ ಕಲ್ಯಾಣ ಕರ್ನಾಟಕದಲ್ಲಿ ಕರ್ನಾಟಕ ಸರ್ಕಾರದಿಂದ ನೇರ ನೇಮಕಾತಿ ಮುಖಾಂತರ ಮತ್ತು ಮುಂಬಡ್ತಿ ಮುಂಖಾಂತರ ಭರ್ತಿ ಮಾಡಬೇಕಾದ ಖಾಲಿ ಹುದ್ದೆಗಳ ಸಂಖ್ಯೆ ಎಷ್ಟು; | ಕಲ್ಯಾಣ ಕರ್ನಾಟಕ ಪ್ರದೇಶದಲ್ಲಿ ನೇರ ನೇಮಕಾತಿಯಡಿ ಒಟ್ಟು 23430 ಹುದ್ದೆಗಳು ಭರ್ತಿ ಮಾಡಬೇಕಾದ ಖಾಲಿ ಹುದ್ದೆಗಳಿದ್ದು, ಈ ಪೈಕಿ ವಿವಿಧ ನೇಮಕಾತಿ ಪ್ರಾಧಿಕಾರಗಳಿಂದ 11613 ಹುದ್ದೆಗಳ ನೇಮಕಾತಿ ಪ್ರಕ್ರಿಯೆ ಜಾಲ್ತಿಯಲ್ಲಿದೆ ಹಾಗೂ 11817 ಹುದ್ದೆಗಳು ಭರ್ತಿಮಾಡಲು ಬಾಕಿ ಇರುತ್ತದೆ. ಮುಂಬಡ್ತಿಯಡಿ 14867 ಹುದ್ದೆಗಳು ಭರ್ತಿಮಾಡಲು ಬಾಕಿ ಇರುತ್ತದೆ. |
| ಆ) | 371(ಜೆ) ವಿಶೇಷ ಸ್ಥಾನ ಹೊಂದಿದ್ದರೂ ಸರ್ಕಾರವು ನೇಮಕಾತಿ ಪ್ರಕ್ರಿಯೆ ಕೈಗೊಳ್ಳದಿರಲು ಕಾರಣಗಳೇನು; | ಭಾರತದ ಸಂವಿಧಾನದ ಅನುಚ್ಛೇಧ 371(ಜೆ) ಅನ್ವಯ ಸ್ಥಳೀಯ ವ್ಯಕ್ತಿಗಳಿಗೆ ಮೀಸಲಿರಿಸಲಾಗಿರುವ ಹುದ್ದೆಗಳಲ್ಲಿ ಕೆಲವು ಹುದ್ದೆಗಳನ್ನು ನ್ಯಾಯಾಲಯ ಪ್ರಕರಣಗಳಿಂದಾಗಿ ಹಾಗೂ ಅರ್ಹ ಸ್ಥಳೀಯ ವ್ಯಕ್ತಿಗಳು ಲಭ್ಯವಿಲ್ಲದಿರುವುದು ಮುಂತಾದ ಆಡಳಿತಾತ್ಮಕ ಕಾರಣಗಳಿಂದಾಗಿ ಭರ್ತಿ ಮಾಡಲು ಸಾಧ್ಯವಾಗಿರುವುದಿಲ್ಲ, ಸರ್ಕಾರದ ಮುಖ್ಯ ಕಾರ್ಯದರ್ಶಿಗಳು ಪ್ರತಿ ತಿಂಗಳು ನಡೆಯುವ ಕಾರ್ಯದರ್ಶಿಗಳ ಸಭೆಯಲ್ಲಿ ಮತ್ತು ಅನುಚ್ಛೇಧ 371(ಜೆ) ಕುರಿತಾದ ಸಚಿವ ಸಂಪುಟ ಉಪ ಸಮಿತಿಯು ತನ್ನ ಸಭೆಗಳಲ್ಲಿ ಸ್ಥಳೀಯ ವೃಂದಗಳಲ್ಲಿ ಲಭ್ಯವಿರುವ ಖಾಲಿ ಹುದ್ದೆಗಳ ಪರಾಮರ್ಶೆ ನಡೆಸುತ್ತಿದ್ದು, ಸಾಧ್ಯವಾದಷ್ಟು ಶೀಘ್ರವಾಗಿ ಎಲ್ಲಾ ಸ್ಥಳೀಯ ವೃಂದದ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಎಲ್ಲಾ ಇಲಾಖೆಗಳ ಕಾರ್ಯದರ್ಶಿಗಳಿಗೆ ಸೂಚನೆಗಳನ್ನು ನೀಡಲಾಗುತ್ತಿದೆ. |
| ಇ) | ಗುಣಮಟ್ಟದ ಆಡಳಿತ ಶಿಕ್ಷಣ ನೀಡಲು ಮತ್ತು ಪ್ರಾದೇಶಿಕ ಅಸಮಾನತೆ ನಿವಾರಿಸಲು ಸರ್ಕಾರ ದಿಟ್ಟಕ್ರಮ ಕೈಗೊಳ್ಳುವುದೇ; | -ಹೌದು-<br><br>ಗುಣಮಟ್ಟದ ಆಡಳಿತ ಶಿಕ್ಷಣ ನೀಡಲು ಮತ್ತು ಪ್ರಾದೇಶಿಕ ಅಸಮಾನತೆ ನಿವಾರಿಸಲು ಸರ್ಕಾರ ಎಲ್ಲಾ |

| | | |
|---|---|---|
| | | ರೀತಿಯ ಅಗತ್ಯ ಕ್ರಮಗಳನ್ನು ಕೈಗೊಳ್ಳುತ್ತಿದೆ. |
| **ಈ)** | ನೇಮಕ ಹೊಂದಿ ನಿಯುಕ್ತಿಯಾದ ಮೇಲೆ ಬೇರೆ ಪ್ರದೇಶಗಳಿಗೆ ನಿಯೋಜನೆ (ಡೆಪ್ಯೂಟೇಶನ್) ಅಥವಾ ತಕ್ಷಣ ವರ್ಗಾವಣೆ ಮಾಡಿಕೊಳ್ಳುವುದಕ್ಕೆ ಏನು ಕ್ರಮ ಕೈಗೊಳ್ಳಲಾಗಿದೆ? | ಸ್ಥಳೀಯ ವೃಂದದಲ್ಲಿ ನೇಮಕಗೊಂಡು ಕಲ್ಯಾಣ ಕರ್ನಾಟಕ ಭಾಗದಲ್ಲಿ ನಿಯುಕ್ತಿಗೊಂಡಿರುವ ವ್ಯಕ್ತಿಗಳ ವರ್ಗಾವಣೆಗೆ ಸಂಬಂಧಿಸಿದಂತೆ ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 17 ಸೇನೌವ 2015, ದಿನಾಂಕ 27.04.2015 ರಲ್ಲಿ ವರ್ಗಾವಣೆ ಮಾರ್ಗಸೂಚಿಗಳನ್ನು ಹೊರಡಿಸಲಾಗಿದ್ದು, ಅದರಂತೆ ಎಲ್ಲಾ ಇಲಾಖೆಗಳು ತಮ್ಮ ಹಂತದಲ್ಲಿಯೇ ಕ್ರಮವಹಿಸುತ್ತಿವೆ (ಪ್ರತಿ ಲಗತ್ತಿಸಿದೆ). |

ಸಂಖ್ಯೆ: ಪಿಡಿಎಸ್ 168 ಹೆಚ್ ಕೆಡಿ 2022

(ಮುನಿರತ್ನ)
ಯೋಜನೆ, ಕಾರ್ಯಕ್ರಮ ಸಂಯೋಜನೆ
ಮತ್ತು ಸಾಂಖ್ಯಿಕ ಇಲಾಖೆ ಸಚಿವರು.

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಸರ್ಕಾರಿ ನೌಕರರ ವರ್ಗಾವಣೆಯ ಬಗ್ಗೆ ಮಾರ್ಗಸೂಚಿಗಳು

ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 17 ಸೇನೌವ 2015 ಬೆಂಗಳೂರು, ದಿನಾಂಕ: 27.04.2015

ಓದಲಾಗಿದೆ:-

1. ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 22 ಸೇನೌವ 2013, ಬೆಂಗಳೂರು ದಿನಾಂಕ: 07.06.2013.
2. ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 22 ಸೇನೌವ 2013, ಬೆಂಗಳೂರು ದಿನಾಂಕ: 14.06.2013.
3. ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 18 ಸೇನೌವ 2014, ಬೆಂಗಳೂರು ದಿನಾಂಕ: 06.02.2014.
4. ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 25 ಸೇನೌವ 2015, ಬೆಂಗಳೂರು ದಿನಾಂಕ: 20.04.2015

ಪ್ರಸ್ತಾವನೆ:-

ಮೇಲೆ ಓದಲಾದ ಉಲ್ಲೇಖ 1 ರಿಂದ 3 ರ ಸರ್ಕಾರದ ಆದೇಶಗಳಲ್ಲಿ ಸರ್ಕಾರಿ ನೌಕರರ ವರ್ಗಾವಣೆ ಕುರಿತಂತೆ ವಿಸ್ತೃತವಾದ ಮಾರ್ಗಸೂಚಿಗಳನ್ನು ನೀಡಲಾಗಿದೆ. ಮೇಲೆ ಓದಲಾದ ಉಲ್ಲೇಖ 4ರ ಸರ್ಕಾರದ ಆದೇಶದಲ್ಲಿ 2015-16ನೇ ಸಾಲಿನಲ್ಲಿ ಮಾಡುವ ವರ್ಗಾವಣೆಗಳ ಬಗ್ಗೆ ಮಾರ್ಗಸೂಚಿಗಳನ್ನು ನೀಡಲಾಗಿದೆ. ಭಾರತ ಸಂವಿಧಾನದ ಅನುಚ್ಛೇದ 371(ಜೆ) ಅನುಷ್ಠಾನಕ್ಕೆ ಸಂಬಂಧಿಸಿದಂತೆ ಸಾರ್ವಜನಿಕ ಉದ್ಯೋಗದಲ್ಲಿ ಹುದ್ದೆಗಳನ್ನು ಗುರುತಿಸಿ ಸ್ಥಳೀಯ ವೃಂದ ಹಾಗೂ ಮಿಕ್ಕುಳಿದ ವೃಂದಗಳೆಂದು ಗುರುತಿಸಲಾಗಿದೆ. ಈ ವೃಂದಗಳಿಗೆ ಸಂಬಂಧಿಸಿದಂತೆ ವರ್ಗಾವಣೆ ಮಾರ್ಗಸೂಚಿಯಲ್ಲಿ ನಿರ್ದಿಷ್ಟ ನಮೂದನ್ನು ಸೇರಿಸುವುದು ಅವಶ್ಯಕವೆಂದು ಭಾವಿಸಲಾಗಿದೆ. ಆದುದರಿಂದ, ಮೇಲೆ 1 ರಲ್ಲಿ ಓದಲಾದ ದಿನಾಂಕ: 07.06.2013 ರ ಆದೇಶದ ಕಂಡಿಕೆ 8 ಹಾಗೂ 10 ರ ನಂತರ ಈ ಕೆಳಕಂಡ ಉಪಖಂಡಗಳನ್ನು ಕ್ರಮವಾಗಿ ಸೇರಿಸಿ ಆದೇಶಿಸಲಾಗಿದೆ.

> "8 (ಅ) ಹೈದ್ರಾಬಾದ್-ಕರ್ನಾಟಕ ಪ್ರದೇಶದಲ್ಲಿ ನೆಲೆಸಿರುವ ಕಛೇರಿಗಳಿಗೆ ಸ್ಥಳೀಯ ವೃಂದ ಮತ್ತು ಮಿಕ್ಕುಳಿದ ವೃಂದಗಳಲ್ಲಿನ ವಿವಿಧ ವೃಂದದ ಹುದ್ದೆಗಳಲ್ಲಿ ಖಾಲಿ ಇರುವ ಹುದ್ದೆಗಳಿಗೆದುರಾಗಿ ನೇಮಕಾತಿ ಹೊಂದಿರುವ ನೌಕರರನ್ನು, ಅವರ ನೇಮಕಾತಿ ದಿನಾಂಕದಿಂದ ಕನಿಷ್ಟ 10 ವರ್ಷಗಳವರೆವಿಗೂ ಹೈದ್ರಾಬಾದ್-ಕರ್ನಾಟಕ ಪ್ರದೇಶ ಹೊರತುಪಡಿಸಿ ವರ್ಗಾವಣೆ ಮಾಡಬಾರದು."
>
> "10 (ಅ) ಅನುಚ್ಛೇದ 371 (ಜೆ) ಅನುಷ್ಠಾನಕ್ಕೆ ಸಂಬಂಧಿಸಿದಂತೆ ಹೊರಡಿಸಲಾದ ಕರ್ನಾಟಕ ಸಾರ್ವಜನಿಕ ಉದ್ಯೋಗ (ಹೈದ್ರಾಬಾದ್-ಕರ್ನಾಟಕ ಪ್ರದೇಶದಲ್ಲಿ ನೇಮಕಾತಿಯಲ್ಲಿ ಮೀಸಲಾತಿ) ಆದೇಶ, 2013 ರಂತೆ ಮಾತೃ ವೃಂದವನ್ನು ವಿಭಜಿಸಿ ರಚಿಸಲಾದ ಸ್ಥಳೀಯ ವೃಂದ ಹಾಗೂ ಮಿಕ್ಕುಳಿದ ವೃಂದಗಳು ನೇರ ನೇಮಕಾತಿ, ಮುಂಬಡ್ತಿ, ಜೇಷ್ಠತೆ ಹಾಗೂ ರೋಸ್ಟರ್ ಬಿಂದುಗಳಿಗೆ ಸಂಬಂಧಿಸಿದಂತೆ ಪ್ರತ್ಯೇಕ ಘಟಕಗಳೆಂದು ಪರಿಗಣಿಸಬೇಕಾಗಿದ್ದು, ಸ್ಥಳೀಯ ವ್ಯಕ್ತಿಗಳನ್ನು ಅವರವರ ಆಯ್ಕೆಗನುಸಾರ ಸ್ಥಳೀಯ ವೃಂದ ಹಾಗೂ ಮಿಕ್ಕುಳಿದ ವೃಂದಗಳಿಗೆ ಹಂಚಿಕೆ ಮಾಡಿರುವುದರಿಂದ, ಸ್ಥಳೀಯ ವ್ಯಕ್ತಿಗಳಿಗೆ ಸಂಬಂಧಿಸಿದಂತೆ ಅವರ ವರ್ಗಾವಣೆಯನ್ನು ಸ್ಥಳೀಯ ವೃಂದದಲ್ಲಿ ಲಭ್ಯವಿರುವ ಹುದ್ದೆಗಳಿಗೆದುರಾಗಿ ಮಾತ್ರ ಪರಿಗಣಿಸಬೇಕಾಗುತ್ತದೆ.

2...

ಮುಂದುವರೆದು, ಮಿಕ್ಕುಳಿದ ವೃಂದಕ್ಕೆ ಸೇರಲು ಆಯ್ಕೆ ನೀಡಿದ ಸ್ಥಳೀಯ ವ್ಯಕ್ತಿಗಳ ವರ್ಗಾವಣೆಗೆ ಸಂಬಂಧಿಸಿದಂತೆ ಮಿಕ್ಕುಳಿದ ವೃಂದದಲ್ಲಿ ಲಭ್ಯವಿರುವ ಹುದ್ದೆಗಳಿಗೆ ಮಾತ್ರ ಪರಿಗಣಿಸತಕ್ಕದ್ದು. ಸ್ಥಳೀಯ ವ್ಯಕ್ತಿಗಳು, ಸ್ಥಳೀಯ ವೃಂದ ಆಯ್ಕೆ ಮಾಡಿದ್ದ ಸನ್ನಿವೇಶದಲ್ಲಿ ಅವರ ಆಯ್ಕೆ ರಾಜ್ಯ ಮಟ್ಟದ ಸ್ಥಳೀಯ ವೃಂದವಾದಲ್ಲಿ ರಾಜ್ಯಮಟ್ಟದ ಸ್ಥಳೀಯ ವೃಂದದಲ್ಲಿ ಲಭ್ಯವಿರುವ ಹುದ್ದೆಗಳಿಗೆದುರಾಗಿ, ಅಂತೆಯೇ, ಅವರ ಆಯ್ಕೆ ಪ್ರಾದೇಶಿಕ, ಜಿಲ್ಲಾ ಅಥವಾ ತಾಲ್ಲೂಕು ಮಟ್ಟದ ಸ್ಥಳೀಯ ವೃಂದಕ್ಕೆ ಆಗಿದ್ದಲ್ಲಿ, ಅವರ ವರ್ಗಾವಣೆ ಪ್ರಾದೇಶಿಕ, ಜಿಲ್ಲಾ ಅಥವಾ ತಾಲ್ಲೂಕು ಮಟ್ಟದ ಸ್ಥಳೀಯ ವೃಂದದಲ್ಲಿ ಲಭ್ಯವಿರುವ ಹುದ್ದೆಗಳಿಗೆದುರಾಗಿ ಮಾತ್ರ ಪರಿಗಣಿಸತಕ್ಕದ್ದು. ನೇಮಕಾತಿ ಪ್ರಾಧಿಕಾರಗಳು ರಾಜ್ಯ, ಪ್ರಾದೇಶಿಕ, ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಸ್ಥಳೀಯ ವೃಂದಕ್ಕೆ ಸೇರಿದ ಹುದ್ದೆಗಳನ್ನು ಒಗ್ಗೂಡಿಸಿ, ರಾಜ್ಯವ್ಯಾಪಿ ಸ್ಥಳೀಯ ವೃಂದ ರಚಿಸಿ ಅಧಿಸೂಚಿಸಿದ್ದಲ್ಲಿ, ಯಾವುದೇ ಸ್ಥಳೀಯ ವೃಂದದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸ್ಥಳೀಯ ವ್ಯಕ್ತಿಗಳನ್ನು ವರ್ಗಾವಣೆ ವಿಷಯಕ್ಕೆ ಸಂಬಂಧಿಸಿದಂತೆ ರಾಜ್ಯವ್ಯಾಪಿ ಸ್ಥಳೀಯ ವೃಂದದಲ್ಲಿ ಲಭ್ಯವಿರುವ ಹುದ್ದೆಗಳಿಗೆದುರಾಗಿ ವೃಂದ ನಿರ್ವಹಣಾ ಹಿತದೃಷ್ಟಿಯಿಂದ ಪರಿಗಣಿಸಬಹುದು."

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ.

(signature) 27/6/15
ಸರ್ಕಾರದ ಅಧೀನ ಕಾರ್ಯದರ್ಶಿ
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಸೇವಾ ನಿಯಮಗಳು-1)

ಗೆ,

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ ಇವರಿಗೆ – ಇದನ್ನು ರಾಜ್ಯಪತ್ರದಲ್ಲಿ ಪ್ರಕಟಿಸಿ ಅದರ 200 ಪ್ರತಿಗಳನ್ನು ಸರ್ಕಾರದ ಅಧೀನ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, ಸೇವಾ ನಿಯಮಗಳು-1, ಕೊಠಡಿ ಸಂಖ್ಯೆ: 31, ವಿಧಾನ ಸೌಧ, ಬೆಂಗಳೂರು ಇವರಿಗೆ ಕಳುಹಿಸಿಕೊಡಲು ಕೋರಿದೆ.

ಇವರಿಗೆ:

1. ಪ್ರಧಾನ ಮಹಾಲೇಖಪಾಲರು (ಜಿ&ಎಸ್‌ಎಸ್‌ಎ)/(ಇ&ಆರ್‌ಎಸ್-ಎ)/(ಎ&ಇ).
2. ಸರ್ಕಾರದ ಮುಖ್ಯ ಕಾರ್ಯದರ್ಶಿಯವರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರು ಹಾಗೂ ಅಭಿವೃದ್ಧಿ ಆಯುಕ್ತರು.
5. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು/ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು.